## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಾರ್ಪಸ್ ಫಂಡ್‌ಗೆ ಸಂಬಂಧಿಸಿದಂತೆ 2019-20ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ/46012/9/2018, ದಿನಾಂಕ:09-09-2019.

ಪ್ರಸ್ತಾವನೆ:

ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ನಾಗಪುರ ಇವರು ಬಾಕಿಯಿರುವ ರೂ.100.00ಲಕ್ಷಗಳ ಕಾರ್ಪಸ್ ಫಂಡ್‌ನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

2019-20ನೇ ಸಾಲಿನಲ್ಲಿ ಕ್ರಿಯಾ ಯೋಜನೆಯಲ್ಲಿ ಕಾರ್ಪಸ್ ಫಂಡ್‌ಗೆ ಸಂಬಂಧಿಸಿದಂತೆ ಯಾವುದೇ ಅನುದಾನ ಅವಕಾಶ ಮಾಡಿಕೊಂಡಿರುವುದಿಲ್ಲ. ಆದರೆ ಇಲಾಖೆಯಿಂದ ಆಯೋಜಿಸಲಾಗುತ್ತಿದ್ದ, ಟಿಪ್ಪು ಜಯಂತಿಯನ್ನು ಸರ್ಕಾರ ರದ್ದು ಮಾಡಿದ್ದು, ಸದರಿ ಕಾರ್ಯಕ್ರಮಕ್ಕೆ ಪ್ರಸಕ್ತ ಸಾಲಿನ ಕ್ರಿಯಾ ಯೋಜನೆಯಲ್ಲಿ ಲೆಕ್ಕಶೀರ್ಷಿಕೆ 2205-00-102-4-31-059ರಡಿ ಕಾಯ್ದಿರಿಸಲಾಗಿದ್ದ ರೂ.69.00ಲಕ್ಷಗಳಲ್ಲಿ ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ನಾಗಪುರ ಇವರಿಗೆ ಸಧ್ಯ ರೂ.25.00ಲಕ್ಷಗಳನ್ನು ನೀಡಬಹುದಾಗಿದ್ದು, ಒಪ್ಪಿದ್ದಲ್ಲಿ ಅನುದಾನ ಬಿಡುಗಡೆ ಮಾಡಲು ನಿರ್ದೇಶಕರು, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ನಾಗಪುರ ಇವರ ಹೆಸರಿನಲ್ಲಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 49 ಕಸಧ 2018, ಬೆಂಗಳೂರು, ದಿನಾಂಕ:17-02-2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ ನಾಗಪುರ ಕೇಂದ್ರ ಇವರಿಗೆ 2019-20ನೇ ಸಾಲಿನ ಕಾರ್ಪಸ್ ಫಂಡ್‌ಗೆ ರೂ.25.00ಲಕ್ಷಗಳನ್ನು (ರೂಪಾಯಿ ಇಪ್ಪತ್ತೈದು ಲಕ್ಷಗಳು ಮಾತ್ರ) ನಿರ್ದೇಶಕರು, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ ನಾಗಪುರ ಕೇಂದ್ರ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಣ ಮಂಜೂರು ಮಾಡಿದ್ದು, ಅದೇ ಉದ್ದೇಶಕ್ಕೆ ಬಳಸತಕ್ಕದ್ದು.

2) ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣಪತ್ರವನ್ನು ಪಡೆದು ಸಲ್ಲಿಸುವುದು.

ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 ರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ: [illegible]-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/2/20

(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ ಶಾಖೆ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ ನಾಗಪುರ ಕೇಂದ್ರ (ನಿರ್ದೇಶಕರ ಮುಖಾಂತರ)
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.